ಅಭಿವೃದ್ಧಿ ಪ್ರಾಧಿಕಾರ ಮಂಜೂರು

304 (178) ಶ್ರೀ ಶಿವಶಂಕರ ರೆಡ್ಡಿ ಎನ್.ಹೆಚ್. (ಗೌರಿಬಿದನೂರು):– ನಗರಾಭಿವೃದ್ಧಿ, ಕಾನೂನು, ನ್ಯಾಯ, ಮಾನವ ಹಕ್ಕುಗಳು, ರಚನೆ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಬೆಂಗಳೂರು ಜಲ ಮಂಡಳಿ ಸಚಿವರು ದಯಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಗೌರಿಬಿದನೂರು ಪಟ್ಟಣಕ್ಕೆ ಅಭಿವೃದ್ಧಿ ಪ್ರಾಧಿಕಾರ ಮಂಜೂರಾಗಿರುವುದು ನಿಜವೇ; ಹಾಗಿದ್ದಲ್ಲಿ ಪಟ್ಟಣದ ವ್ಯಾಪ್ತಿಯನ್ನು ವಿಸ್ತರಿಸಲಾಗಿದೆಯೇ?

ಆ) ಹೊಸದಾಗಿ ಸೇರ್ಪಡೆಗೊಳಿಸಿದ ಹಳ್ಳಿಗಳು ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಒಳಪಟ್ಟಿರುವುದರಿಂದ ಪುನರ್ ವಿಂಗಡಿಸಿ ಯಾವ ರೀತಿ ಮಾಡಲಾಗುವುದು; ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು (ವಿವರ ನೀಡುವುದು)?

ಶ್ರೀ ಎಸ್. ಸುರೇಶ್‌ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಬೆಂಗಳೂರು ಜಲ ಮಂಡಳಿ ಸಚಿವರು):–

ಅ) ಗೌರಿಬಿದನೂರು ಪಟ್ಟಣಕ್ಕೆ ಅಭಿವೃದ್ಧಿ ಪ್ರಾಧಿಕಾರ ಮಂಜೂರಾಗಿರುವುದಿಲ್ಲ. ಪುರಸಭಾ ಎಲ್ಲೆಯನ್ನು ಯೋಜನಾ ಪ್ರಾಧಿಕಾರವೆಂದು ರಚಿಸಲಾಗಿದೆ ಆದ್ದರಿಂದ ಪಟ್ಟಣದ ವ್ಯಾಪ್ತಿಯನ್ನು ವಿಸ್ತರಿಸಲಾಗಿರುವುದಿಲ್ಲ.

ಆ) ಹೊಸದಾಗಿ ಯಾವುದೇ ಹಳ್ಳಿಗಳನ್ನು ಸೇರ್ಪಡೆ ಮಾಡಿರುವುದಿಲ್ಲ.

ಸಿ.ಆರ್.ಎಫ್ ಯೋಜನೆ

305 (283) ಶ್ರೀ ಶಿವಶಂಕರ ರೆಡ್ಡಿ (ಗೌರೀಬಿದನೂರು) :– ಲೋಕೋಪಯೋಗಿ ಸಚಿವರು ದಯಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಕರ್ನಾಟಕ ರಾಜ್ಯದಲ್ಲಿ ಪ್ರಸಕ್ತ ಸಾಲಿನಲ್ಲಿ ಕೇಂದ್ರ ಸರ್ಕಾರದ ಸಿ.ಆರ್.ಎಫ್. ಯೋಜನೆಗಳಲ್ಲಿ ಎಷ್ಟು ಕಾಮಗಾರಿಗಳನ್ನು ಮಂಜೂರು ಮಾಡಲಾಗಿದೆ (ಜಿಲ್ಲಾವಾರು ವಿವರ ಒದಗಿಸುವುದು);